ಹಟ್ಟಿ ಚಿನ್ನದ ಗಣಿಗಳ ದಿನಗೂಲಿ ನೌಕರರು.

311 (2111)

ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್ (ಲಿಂಗಸುಗೂರು): ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಲಿಂಗಸೂಗೂರು ಮತ ಕ್ಷೇತ್ರದ ಲಿಂಗಸೂಗೂರು ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತ, ಹಟ್ಟಿ, ಇಲ್ಲಿ ಗಣಿಗೆ ನೀರು ಪೂರೈಕೆ ಮಾಡುವ ಸಂದರ್ಭದಲ್ಲಿ ಭೂಮಿ ಕಳೆದುಕೊಂಡವರನ್ನು ದಿನಗೂಲಿ ಆಧಾರದ ಮೇಲೆ ನೇಮಿಸಿಕೊಂಡು ಅವರನ್ನು ಸೇವೆಯಲ್ಲಿ ಖಾಯಂ ಗೊಳಿಸವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎ.ಬಿ.ಪಾಟೀಲ್(ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ಬಂದಿದೆ.

ಆ) ಪ್ರಸ್ತುತ ಹಟ್ಟಿ ಚಿನ್ನದ ಗಣಿಯು ಹಣಕಾಸಿನ ಬಿಕ್ಕಟ್ಟನ್ನು ಎದುರಿಸುತ್ತಿದ್ದು ಸದರಿ 22 ನೌಕರರನ್ನು ಖಾಯಂಗೊಳಿಸಿದಲ್ಲಿ ಸಂಸ್ಥೆಗೆ ಹಣಕಾಸಿನ ಹೊರೆ ಉಂಟಾಗುವುದರಿಂದ ಅವರ ಸೇವೆಯನ್ನು ಖಾಯಂಗೊಳಿಸಲು ವಿಳಂಬವಾಗುತ್ತಿದೆ. ಸದರಿ ನೌಕರರ ಸೇವೆಯನ್ನು ಖಾಯಂಗೊಳಿಸುವ ಬಗ್ಗೆ ಹಟ್ಟಿ ಚಿನ್ನದ ಗಣಿಯ ಹಣಕಾಸಿನ ಸ್ಥಿತಿ ಸುಧಾರಿಸಿದ ಮೇಲೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಶ್ರೀ ಅಮರೇಗೌಡ ಲಿಂಗನಗೌಡ ಪಾಟೀಲ್: ಮಾನ್ಯ ಅಧ್ಯಕ್ಷರೇ, ಈ ಕಂಪನಿಯಲ್ಲಿ ಕಳೆದ ಏಳು ವರ್ಷಗಳಿಂದ ಬಹಳಷ್ಟು ಜನರು ದಿನಗೂಲಿ ನೌಕರರಾಗಿ ಕೆಲಸ ಮಾಡುತ್ತಾ ಇದ್ದಾರೆ. ಇವರನ್ನು ಕಂಪನಿಯ ಖಾಯಂ ನೌಕರರನ್ನಾಗಿ ಮಾಡಿಕೊಳ್ಳಬೇಕೆಂದು ತಮ್ಮ ಮೂಲಕ ಕೇಳಿಕೊಳ್ಳುತ್ತೇನೆ.

ಶ್ರೀ ಎ.ಬಿ.ಪಾಟೀಲ್(ಗಣಿ ಮತ್ತು ಭೂ ವಿಜ್ಞಾನ ಸಚಿವರು): ಮಾನ್ಯ ಅಧ್ಯಕ್ಷರೇ, ಮಾನ್ಯ ಸದಸ್ಯರು ನನ್ನ ಕಚೇರಿಗೆ ಬಂದಾಗ ನಾನು ಅವರಲ್ಲಿ ವಿವರವಾಗಿ ಚರ್ಚಿಸಿದ್ದೇನೆ. ಆದಷ್ಟು ಜಾಗ್ರತೆ ನಮ್ಮ ಹಣಕಾಸಿನ ಪರಿಸ್ಥಿತಿಯು ಸುಧಾರಿಸಿದ ನಂತರ ಸದರಿ ನೌಕರರನ್ನು ಖಾಯಂಗೊಳಿಸುವ ಬಗ್ಗೆ ಸೂಕ್ತ ಕ್ರಮವನ್ನು ಜರುಗಿಸುತ್ತೇನೆ.